**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 27 ಸೇಇವಿ 2018

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ: 08.04.2019

## ಅಧಿಸೂಚನೆ

ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ: 11.02.2019ರ ಅಧಿಸೂಚನೆ ಸಂಖ್ಯೆ: ಸಿಆಸುಇ 27 ಸೇಇವಿ 2018ರಲ್ಲಿ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ ರಾಜ್ಯಪತ್ರದಲ್ಲಿ ಇದರ ಪ್ರಕಟಣೆಯ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ:11.02.2019ರ ಕರ್ನಾಟಕ ವಿಶೇಷ ರಾಜ್ಯಪತ್ರದ ಭಾಗ-IVಎ (ಸಂ. 105) ರಲ್ಲಿ ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14)ರ 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡದ ಮೂಲಕ ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ;

ಸದರಿ ವಿಶೇಷ ರಾಜ್ಯ ಪತ್ರವನ್ನು ದಿನಾಂಕ:11.02.2019ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು, ಸದರಿ ಕರಡಿನ ಬಗ್ಗೆ ಯಾವುದೇ ಆಕ್ಷೇಪಣೆ/ಸಲಹೆಯು ಸ್ವೀಕೃತವಾಗದಿರುವುದರಿಂದ;

ಈಗ, ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ, 14)ರ 8ನೇ ಪ್ರಕರಣದೊಂದಿಗೆ ಓದಿಕೊಂಡ 3ನೇ ಪ್ರಕರಣದ (1)ನೇ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ನಿಯಮಗಳನ್ನು ರಚಿಸುತ್ತದೆ ಎಂದರೆ:-

## ನಿಯಮಗಳು

**1. ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) (ತಿದ್ದುಪಡಿ) ನಿಯಮಗಳು, 2018 ಎಂದು ಕರೆಯತಕ್ಕದ್ದು.

(2) ಅವುಗಳು 1ನೇ ಜುಲೈ 2017ರಿಂದ ಜಾರಿಗೆ ಬಂದಿವೆ ಎಂದು ಭಾವಿಸತಕ್ಕದ್ದು.

**2. 5ನೇ ನಿಯಮದ ತಿದ್ದುಪಡಿ**:- ಕರ್ನಾಟಕ ಸಿವಿಲ್ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ (ಇಲ್ಲಿ ಇನ್ನು ಮುಂದೆ ಸದರಿ ನಿಯಮಗಳೆಂದು ಉಲ್ಲೇಖಿಸಲಾಗಿದೆ) 5ನೇ ನಿಯಮದಲ್ಲಿ, (3)ನೇ ಉಪನಿಯಮದ ಬದಲಾಗಿ ಈ ಮುಂದಿನದನ್ನು ಪ್ರತಿಸ್ಥಾಪಿಸತಕ್ಕದ್ದು:-

**"3. ರಾಜ್ಯ ಸಿವಿಲ್ ಸೇವೆಗಳು**

(ಎ) ಸಮೂಹ "ಎ" ಯು ರೂ. 52650-1250-53900-1450-62600-1650-72500-1900-83900-2200-97100 ರ ಮತ್ತು ಅದಕ್ಕೂ ಮೇಲ್ಪಟ್ಟ ವೇತನ ಶ್ರೇಣಿಗಳನ್ನು ಹೊಂದಿರುವ ಹುದ್ದೆಗಳನ್ನು ಒಳಗೊಂಡಿರತಕ್ಕದ್ದು.

(ಬಿ) ಸಮೂಹ "ಬಿ" ಯು ರೂ. 40900-1100-46400-1250-53900-1450-62600-1650-72500-1900-78200 ರ ಮತ್ತು ಅದಕ್ಕೂ ಮೇಲ್ಪಟ್ಟ ವೇತನ ಶ್ರೇಣಿಗಳನ್ನು ಆದರೆ, ರೂ. 52650-1250-53900-1450-62600-1650-72500-1900-83900-2200-97100ಕ್ಕಿಂತ ಕೆಳಗಿನ ವೇತನ ಶ್ರೇಣಿಯನ್ನು ಹೊಂದಿರುವ ಹುದ್ದೆಗಳನ್ನು ಒಳಗೊಂಡಿರತಕ್ಕದ್ದು.

(ಸಿ) ಸಮೂಹ "ಸಿ" ಯು ರೂ. 21400-500-22400-550-24600-600-27000-650-29600-750-32600-850-36000-950-39800-1100-42000 ರ ವೇತನ ಶ್ರೇಣಿಗಿಂತ ಮೇಲ್ಪಟ್ಟ ವೇತನ ಶ್ರೇಣಿಗಳನ್ನು ಆದರೆ ರೂ. 40900-1100-46400-1250-53900-1450-62600-1650-72500-1900-78200 ಕ್ಕಿಂತ ಕೆಳಗಿನ ವೇತನ ಶ್ರೇಣಿಯನ್ನು ಹೊಂದಿರುವ, ಆದರೆ ಅನುಸೂಚಿ-III ರಲ್ಲಿ ನಿರ್ದಿಷ್ಟ ಪಡಿಸಿರುವ ಹುದ್ದೆಗಳನ್ನು ಹೊರತುಪಡಿಸಿದ ಹುದ್ದೆಗಳನ್ನು ಒಳಗೊಂಡಿರತಕ್ಕದ್ದು.

(ಡಿ) ಸಮೂಹ "ಡಿ" ಯು ಅನುಸೂಚಿ-IIIರಲ್ಲಿ ನಿರ್ದಿಷ್ಟ ಪಡಿಸಿರುವ ಹುದ್ದೆಗಳನ್ನು ಮತ್ತು ರೂ.17000-400-18600-450-20400-500-22400-550-24600-600-27000-650-28950 ಕ್ಕಿಂತ ಮೇಲ್ಪಟ್ಟು ವೇತನ ಶ್ರೇಣಿಗಳನ್ನು ಆದರೆ, ರೂ.21400-500-22400-550-24600-600-27000-650-29600-750-32600-850-36000-950-39800-1100-42000 ಕ್ಕಿಂತ ಕೆಳಗಿನ ವೇತನ ಶ್ರೇಣಿಯನ್ನು ಹೊಂದಿರುವ ಹುದ್ದೆಗಳನ್ನು ಒಳಗೊಂಡಿರತಕ್ಕದ್ದು.

**ವಿವರಣೆ:-** ಈ ಉಪನಿಯಮದ ಉದ್ದೇಶಗಳಿಗಾಗಿ "ವೇತನ ಶ್ರೇಣಿ" ಎಂದರೆ ಕರ್ನಾಟಕ ಸಿವಿಲ್ ಸೇವಾ(ಪರಿಷ್ಕೃತ ವೇತನ) ನಿಯಮಗಳು, 2018ರಲ್ಲಿ ಮತ್ತು ಅದಕ್ಕೆ ಸಂಬಂಧಿಸಿದ ಆದೇಶಗಳಲ್ಲಿ ಹೇಳಿರುವ ವಿವಿಧ ಹುದ್ದೆಗಳಿಗೆ ಸಂಬಂಧಿಸಿದಂತೆ ನಿಗದಿಪಡಿಸಿದ ಪರಿಷ್ಕೃತ ವೇತನ ಶ್ರೇಣಿ.

**3. 9ನೇ ನಿಯಮದ ತಿದ್ದುಪಡಿ:-** ಸದರಿ ನಿಯಮಗಳು 9ನೇ ನಿಯಮದ (2)ನೇ ಉಪನಿಯಮದಲ್ಲಿ-

(i) (ಬಿಬಿ) ಖಂಡದಲ್ಲಿ "48900-63600 ರೂ.ಗಳಿಗಿಂತ ಕಡಿಮೆಯಿಲ್ಲದ" ಎಂಬ ಪದಗಳಿಗೆ ಮತ್ತು ಅಂಕಿಗಳಿಗೆ ಬದಲಾಗಿ "ರೂ.90500-123300 ಗಳಿಗಿಂತ ಕಡಿಮೆಯಿಲ್ಲದ" ಎಂಬ ಪದಗಳನ್ನು ಮತ್ತು ಅಂಕಿಗಳನ್ನು ಮತ್ತು "ರೂ.30400-51300 ಗಳಿಗಿಂತ ಹೆಚ್ಚಲ್ಲದ" ಎಂಬ ಪದಗಳಿಗೆ ಮತ್ತು ಅಂಕಿಗಳಿಗೆ ಬದಲಾಗಿ "ರೂ.56800-99600 ಗಳಿಗಿಂತ ಹೆಚ್ಚಲ್ಲದ" ಎಂಬ ಪದಗಳನ್ನು ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

(ii) (ಬಿಬಿಬಿ) ಖಂಡದಲ್ಲಿ, "48900-63600 ರೂ.ಗಳಿಗಿಂತ ಕಡಿಮೆ" ಎಂಬ ಪದಗಳಿಗೆ ಮತ್ತು ಅಂಕಿಗಳಿಗೆ ಬದಲಾಗಿ "ರೂ.90500-123300 ಗಳಿಗಿಂತ ಕಡಿಮೆ" ಎಂಬ ಪದಗಳನ್ನು ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

(iii) (ಬಿಬಿಬಿ-1) ಖಂಡದಲ್ಲಿ "40050-56550 ರ ವೇತನ ಶ್ರೇಣಿಯಲ್ಲಿರುವ" ಎಂಬ ಪದಗಳಿಗೆ ಮತ್ತು ಅಂಕಿಗಳಿಗೆ ಬದಲಾಗಿ "ರೂ.74400-109600 ರ ವೇತನ ಶ್ರೇಣಿಯಲ್ಲಿರುವ" ಎಂಬ ಪದಗಳನ್ನು ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

**4. 10ನೇ ನಿಯಮದ ತಿದ್ದುಪಡಿ:-** ಸದರಿ ನಿಯಮಗಳ 10ನೇ ನಿಯಮದ (8)ನೇ ಉಪ ನಿಯಮದಲ್ಲಿನ ಕ್ರಮ ಸಂಖ್ಯೆ (10)ರಲ್ಲಿನ "40050-56550" ಎಂಬ ಅಂಕಿಗಳ ಬದಲಾಗಿ "74400-109600" ಎಂಬ ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎ.ವಿ.ಶೈಲಜ)**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ - ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 600 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-ಸಿ)ಗೆ ಕಳುಹಿಸಿಕೊಡಲು ಕೋರಿದೆ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿಗಳು.
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.

8. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

9. *ಮಹಾ ನಿಬಂಧಕರು, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು.

10. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

11. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು.

12. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.

13. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.

14. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು

15. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

**(*ಮುಖಪತ್ರದೊಂದಿಗೆ)**